ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 09ನೇ ಫೆಬ್ರವರಿ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2 .ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2014
ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014
ಶ್ರೀ ಬಿ.ರಮಾನಾಥ ರೈ (ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

4 . ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್.ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2. ಶ್ರೀಯುತರುಗಳಾದ ಎಂ.ಕೆ.ಸೋಮಶೇಖರ್, ಟಿ.ವೆಂಕಟರಮಣಯ್ಯ ಮತ್ತು ರುದ್ರಪ್ಪ ಮಾನಪ್ಪ ಲಮಾಣಿ ಅವರುಗಳು ಕರ್ನಾಟಕ ರಾಜ್ಯದ ಪೌರಕಾರ್ಮಿಕರ ದುಸ್ಥಿತಿ ಹಾಗೂ ಅವರ ಮೇಲಿನ ದೌರ್ಜನ್ಯದ ಬಗ್ಗೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಜಿ. ಬೋಪಯ್ಯ ಅವರು ಮೈಸೂರು ಬಂಟ್ವಾಳ ರಸ್ತೆಯಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಿದ್ದರೂ, ಭಾರಿ ವಾಹನಗಳು ಸಂಚರಿಸುತ್ತಿರುವುದರಿಂದ ಸಂಪಾಜೆ ಭಾಗದಲ್ಲಿ ರಸ್ತೆ ಕುಸಿದಿದ್ದು, ಆ ರಸ್ತೆಯನ್ನು ದುರಸ್ತಿಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

2. ಶ್ರೀಯುತರುಗಳಾದ ಹೆಚ್.ಎಸ್.ಪ್ರಕಾಶ್ ಮತ್ತು ಹೆಚ್.ಡಿ.ರೇವಣ್ಣ ಅವರು ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 75, ಬೆಂಗಳೂರು-ಮಂಗಳೂರು ಬೈಪಾಸ್ ರಸ್ತೆಯ ತಿಪಟೂರು-ದುದ್ದ-ಹಾಸನ (ರಾಜ್ಯ ಹೆದ್ದಾರಿ ಸಂಖ್ಯೆ-71)ನ್ನು ಸಂಪರ್ಕಿಸುವ ರಾಜ್ಯ ಹೆದ್ದಾರಿ ಸಂಖ್ಯೆ71ಇ (ಡೈರಿ ಸರ್ಕಲ್‌ನಿಂದ ಬುತ್ತೇನಹಳ್ಳಿ) ರಸ್ತೆಯ ಸರಪಳಿ 0.00ಕಿ.ಮೀ ದಿಂದ 0.45ರವರೆಗಿನ 4 ಪಥದ ರಸ್ತೆಯಲ್ಲಿ ಅಪಘಾತಗಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಅದನ್ನು 6 ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಸ್.ಟಿ.ಸೋಮಶೇಖರ್ ಅವರು ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅರ್ಜಿ ಸಲ್ಲಿಸಿರುವ ಬಗರ್ ಹುಕುಂ ಸಾಗುವಳಿದಾರರಿಗೆ ಹಾಗೂ ಮಂಚನಬೆಲೆ ಅಣೆಕಟ್ಟಿನ ಮುಳಗಡೆ ಪ್ರದೇಶದ ರೈತರಿಗೆ ನೀಡಿರುವ ಪರಿಹಾರ ಜಮೀನುಗಳನ್ನು ಪೋಡಿ ಮಾಡದೇ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಭೀಮಾ ವಿಮಾ ಯೋಜನೆಯಡಿಯಲ್ಲಿ ಆಸ್ಪತ್ರೆಗಳ ಆಯ್ಕೆ ಮತ್ತು ಖಾಯಿಲೆಗಳಿಗೆ ಚಿಕಿತ್ಸೆಯ ವೆಚ್ಚವನ್ನು ನಿಗದಿ ಮಾಡುವಲ್ಲಿ ಆಗಿರುವ ಗೊಂದಲದ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.

5. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿಯಲ್ಲಿ ಕಾಮಗಾರಿಗಳನ್ನು ನಿಯಮಬಾಹಿರವಾಗಿ ಮಂಜೂರು ಮಾಡಿರುವುದರಿಂದ ಪಾವಗಡ ಕ್ಷೇತ್ರದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನಾಂಗದವರಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಸ್.ಆರ್. ಶ್ರೀನಿವಾಸ್ ಅವರು ಗುಬ್ಬಿ ತಾಲ್ಲೂಕು, ಹಾಗಲವಾಡಿ-20 ಗ್ರಾಮಗಳು ಮತ್ತು ಪೆರಮಸಂದ್ರ-22 ಗ್ರಾಮಗಳಿಗೆ ರಾಜೀವಗಾಂಧಿ ಬಹುಗ್ರಾಮಗಳ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳಿಗೆ ಅನುದಾನವನ್ನು ನೀಡಿ ಕಾಮಗಾರಿಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

7. ಶ್ರೀ ಎನ್.ಹೆಚ್. ಕೋನರೆಡ್ಡಿ ಅವರು ಧಾರವಾಡ ಜಿಲ್ಲೆಯ, ನವಲಗುಂದ ಮತ್ತು ಹುಬ್ಬಳ್ಳಿ ತಾಲ್ಲೂಕಿನಲ್ಲಿ ಅತಿವೃಷ್ಟಿಯಿಂದ ರೈತರು ಬೆಳೆದಿದ್ದ ಈರುಳ್ಳಿ, ಹೆಸರು, ಗೋವಿನ ಜೋಳ, ಹತ್ತಿ, ಮೆಣಸಿನಕಾಯಿ ಹಾಗೂ ಇನ್ನಿತರ ಬೆಳೆಗಳು ನಾಶವಾಗಿದ್ದು ಆ ಪೈಕಿ ಈರುಳ್ಳಿ ಬೆಳೆಗೆ ಮಾತ್ರ ಪರಿಹಾರ ನೀಡಿದ್ದು, ಉಳಿದ ಬೆಳೆಗಳಿಗೆ ಪರಿಹಾರ ನೀಡದೆ ರೈತರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. ಶ್ರೀ ಪಿ. ರಾಜೀವ ಅವರು ಕುಡಚಿ ಮತಕ್ಷೇತ್ರದಲ್ಲಿ ಬರುವ ಹಾರೂಗೇರಿ ಮತ್ತು ಮುಗಳಖೋಡ ಗ್ರಾಮಗಳನ್ನು ಹೋಬಳಿ ಕೇಂದ್ರವನ್ನಾಗಿ ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಪ್ರಮೋದ್ ಮಧ್ವರಾಜ್ ಅವರು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಭೂ ಪರಿವರ್ತಿತ ಜಮೀನುಗಳಲ್ಲಿ ವಿನ್ಯಾಸ ಅನುಮೋದನೆಗಾಗಿ ಮಾಡಲಾಗಿರುವ ಮಾರ್ಗಸೂಚಿಯ ಜಾರಿಯಿಂದಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

10. ಶ್ರೀ ಎನ್.ಚಲುವರಾಯಸ್ವಾಮಿ ಅವರು ಮಂಡ್ಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 1993-94ರಿಂದ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂ ನೌಕರರೆಂದು ಪರಿಗಣಿಸಿ ಅಗತ್ಯ ಸೌಲಭ್ಯಗಳನ್ನು ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm